ಕರ್ನಾಟಕ ಸರ್ಕಾರ

# ಜಿಲ್ಲಾಧಿಕಾರಿ ಮತ್ತು ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ
# ಉತ್ತರ ಕನ್ನಡ ಜಿಲ್ಲೆ, ಕಾರವಾರ

ಸಂ.ಡಿಸಿಬಿ/ಎಂಎಜಿ/ಇತರೆ/ವಿವ–401/2019–20 ದಿನಾಂಕ: 22–3–2020

**ವಿಷಯ:** ಉತ್ತರ ಕನ್ನಡ ಜಿಲ್ಲೆಯಲ್ಲಿ ಕೊವಿಡ್–19 ಎಂಬ ವೈರಾಣುಗಳಿಂದ ಹರಡುವ ಅಪಾಯಕಾರಿ ಸಾಂಕ್ರಮಿಕ ರೋಗವನ್ನು ತಡೆಗಟ್ಟಲು ಮುಂಜಾಗ್ರತ ಕ್ರಮಗಳನ್ನು ಜರುಗಿಸುವ ಕುರಿತು.

**ಉಲ್ಲೇಖ:** 1. ಸಾಂಕ್ರಮಿಕ ರೋಗ ಕಾಯ್ದೆ 1897

2. ಕರ್ನಾಟಕ ಸರಕಾರದ ಅಧಿಸೂಚನೆ ಸಂ. ಹೆಚ್‌ಎಫ್‌ಡಬ್ಲ್ಯು/ 54/ ಸಿಜಿಎಂ/2020 ದಿನಾಂಕ: 11–3–2020.

**ಪ್ರಸ್ತಾವನೆ:**

ಕರ್ನಾಟಕ ರಾಜ್ಯದ ಧಾರವಾಡ ಜಿಲ್ಲೆಯಲ್ಲಿ ಕೋವಿಡ–19 ವೈರಾಣುಗಳಿಂದ ಹರಡುವ ಸಾಂಕ್ರಮಿಕ ರೋಗದ ಪ್ರಕರಣವೊಂದು ಧೃಡಪಟ್ಟಿದೆ. ಈ ರೋಗವು ಸುತ್ತಮುತ್ತಲಿನ ಪ್ರದೇಶದಲ್ಲಿ ಪಸರಿಸದಂತೆ ಗಮನ ಹರಿಸುವುದು ಅನಿವಾರ್ಯವಾಗಿರುತ್ತದೆ. ಆದ್ದರಿಂದ ಧಾರವಾಡ ಜಿಲ್ಲೆಗೆ ಹೊಂದಿಕೊಂಡಿರುವ ಉತ್ತರ ಕನ್ನಡ ಜಿಲ್ಲೆಯ ಮುಂಡಗೋಡ, ಯಲ್ಲಾಪುರ ಮತ್ತು ಹಳಿಯಾಳ ತಾಲೂಕುಗಳಿಗೆ ಧಾರವಾಡ ಜಿಲ್ಲೆಯಿಂದ ಎಲ್ಲಾ ರೀತಿಯ ಅಗಮನ/ನಿರ್ಗಮನ ಚಟುವಟಿಕೆಗಳನ್ನು ನಿಯಂತ್ರಿಸುವುದು ಸಾರ್ವಜನಿಕರ ಹಿತದೃಷ್ಟಿಯಿಂದ ಸೂಕ್ತವೆಂದು ಮನವರಿಕೆಯಾಗಿದೆ. ಉಲ್ಲೇಖ(2)ರ ಅಧಿಸೂಚನೆಯ ಅನುಕ್ರಮಾಂಕ 13 ರಲ್ಲಿ ವಿವರಿಸಿದಂತೆ ಜಿಲ್ಲಾ ವಿಪತ್ತು ನಿರ್ವಹನಾ ಸಮಿತಿಯ ಮುಖ್ಯಸ್ಥನಾಗಿ ಕೋವಿಡ್–19 ವೈರಾಣುಗಳ ತಡೆಗೆ ಸೂಕ್ತವಾದ ಯೋಜನಾ ತಂತ್ರ ರೂಪಿಸಿ ಅನುಷ್ಠಾನಕ್ಕೆ ತರಲು ಜಿಲ್ಲಾಧಿಕಾರಿಗಳಿಗೆ ಅಧಿಕಾರವನ್ನು ಪ್ರದತ್ತಿಕರಿಸಲಾಗಿದೆ. ಕಾರಣ ಈ ಕೆಳಗಿನಂತೆ ಆದೇಶ ಮಾಡಿದೆ–

**:ಆದೇಶ:**

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳಿಂದಾಗಿ ಮತ್ತು ನನ್ನಲ್ಲಿ ಪ್ರದತ್ತವಾದ ಅಧಿಕಾರದ ಮೇರೆಗೆ ಧಾರವಾಡ ಜಿಲ್ಲೆಯಿಂದ ಉತ್ತರ ಕನ್ನಡ ಜಿಲ್ಲೆಯ ಮುಂಡಗೋಡ, ಯಲ್ಲಾಪುರ ಮತ್ತು ಹಳಿಯಾಳ ತಾಲೂಕುಗಳಿಗೆ ಜೀವನೋಪಾಯಕ್ಕೆ ಅತ್ಯವಶ್ಯಕವಿರುವ ಆಹಾರ ಪದಾರ್ಥ ಮತ್ತು ಸಾಮಗ್ರಿಗಳ ಸಾಗಾಟ

Scanned with CamScanner

**ಹೊರತುಪಡಿಸಿ** ಈ ಕೆಳಗಿನ ರೀತಿಯ ಎಲ್ಲಾ ಆಗಮನ ಮತ್ತು ನಿರ್ಗಮನ ಚಟುವಟಿಕೆಗಳನ್ನು ನಿರ್ಬಂಧಿಸಿ ಆದೇಶಿಸಿದೆ.

1. ಒಂದು ತಿಂಗಳು ಅಥವಾ ಅದಕ್ಕಿಂತ ಮೇಲ್ಪಟ್ಟ ಅವಧಿಯಿಂದ ಧಾರವಾಡ ಜಿಲ್ಲೆಯಲ್ಲಿ ವಾಸಿಸುತ್ತಿರುವ ಉತ್ತರ ಕನ್ನಡ ಜಿಲ್ಲೆಯ ನಿವಾಸಿಗರ ಆಗಮನ.
2. ಅತ್ಯಂತ ತುರ್ತುವಲ್ಲದ ಕೆಲಸಗಳಿಗೆ ಹೊರತುಪಡಿಸಿ ಧಾರವಾಡ ಜಿಲ್ಲೆಯಿಂದ ಉತ್ತರ ಕನ್ನಡ ಜಿಲ್ಲೆಗೆ ಸಾರ್ವಜನಿಕರ ಆಗಮನ ಮತ್ತು ನಿರ್ಗಮನ.

ಈ ಆದೇಶವು ತಕ್ಷಣದಿಂದ ಜಾರಿಗೆ ಬರುತ್ತದೆ ಮತ್ತು ಮುಂದಿನ ಆದೇಶದವರೆಗೆ ಊರ್ಜಿತದಲ್ಲಿರುತ್ತದೆ.

ಈ ಆದೇಶದ ಅನುಷ್ಠಾನಕ್ಕೆ ಧಾರವಾಡ ಜಿಲ್ಲೆಗೆ ಹೊಂದಿಕೊಂಡಿರುವ ಉತ್ತರ ಕನ್ನಡ ಜಿಲ್ಲೆಯ ಮುಂಡಗೋಡ, ಯಲ್ಲಾಪುರ ಮತ್ತು ಹಳಿಯಾಳ ತಾಲೂಕಿನ ಯಾವತ್ತೂ ತನಿಖಾ ಠಾಣೆಗಳನ್ನು ಸಶಕ್ತಗೊಳಿಸಿ ಆದೇಶದ ಕಟ್ಟುನಿಟ್ಟಿನ ಅನುಷ್ಠಾನಕ್ಕೆ ಪೋಲೀಸ್ ವರಿಷ್ಠಾಧಿಕಾರಿ, ಉತ್ತರ ಕನ್ನಡ, ಕಾರವಾರರವರು ಕ್ರಮ ಜರುಗಿಸತಕ್ಕದ್ದು.

ಜಿಲ್ಲಾ ದಂಡಾಧಿಕಾರಿ, ಉ.ಕ.
District Magistrate, Uttara Kannada

(ಡಾ. ಹರೀಶ್ ಕುಮಾರ್ ಕೆ.)
ಜಿಲ್ಲಾ ದಂಡಾಧಿಕಾರಿ
ಉತ್ತರ ಕನ್ನಡ, ಕಾರವಾರ

ಪ್ರತಿ: ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ–

1. ಪೋಲೀಸ್ ವರಿಷ್ಠಾಧಿಕಾರಿ, ಉತ್ತರ ಕನ್ನಡ ಜಿಲ್ಲೆ, ಕಾರವಾರ
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕಾರವಾರ
3. ಜಿಲ್ಲಾ ಆರೋಗ್ಯಾಧಿಕಾರಿಗಳು, ಉತ್ತರ ಕನ್ನಡ ಜಿಲ್ಲೆ
4. ಉಪ–ವಿಭಾಗೀಯ ದಂಡಾಧಿಕಾರಿ, ಕಾರವಾರ ಉಪ–ವಿಭಾಗ, ಕಾರವಾರ & ಶಿರಸಿ
5. ತಾಲೂಕು ಕಾರ್ಯನಿರ್ವಾಹಕ ದಂಡಾಧಿಕಾರಿ, ಮುಂಡಗೋಡ, ಯಲ್ಲಾಪುರ & ಹಳಿಯಾಳ.

ಜಿಲ್ಲಾ ದಂಡಾಧಿಕಾರಿ
ಉತ್ತರ ಕನ್ನಡ, ಕಾರವಾರ

Scanned with CamScanner